ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಶಾಖೆ / ವಿಷಯ: DEPARTMENT / SUBJECT: ಇತರ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ

ದಿನಾಂಕ : DATE : 02/08/2019

# ಉ.ಪ್ರ: ಸಂಪುಟ ಸಭೆಗಳಲ್ಲಿ ಮೊಬೈಲ್ ಬಳಕೆ ನಿಷೇಧ

ವಿಶ್ವವಾಣಿ 2/8



**ಲಖನೌ:** ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ, ಸರಕಾರಿ ಅಧಿಕಾರಿಗಳ ಸಭೆ ಮತ್ತು ಕ್ಯಾಬಿನೆಟ್ ಮೀಟಿಂಗ್‌ಗಳಲ್ಲಿ ಮೊಬೈಲ್ ಫೋನ್ ಬಳಕೆಯನ್ನು ನಿಷೇಧಿಸಿದ್ದಾರೆ. ಸಭೆಗಳಲ್ಲಿ ಪಾಲ್ಗೊಳ್ಳುವವರ ಗಮನ ಅತ್ತಇತ್ತ ಸರಿಯಬಾರದು. ಚರ್ಚೆ ನಡೆಯುವ ವೇಳೆ ಕೆಲ ಸಚಿವರು ವಾಟ್ಸಾಪ್ ಮೆಸೇಜ್‌ಗಳನ್ನು ಓದುವುದರಲ್ಲಿ ತಲ್ಲೀನರಾಗುತ್ತಾರೆ. ಇದು ಚರ್ಚೆಯ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ ಎಂಬುದನ್ನು ಮನಗಂಡು ಮುಖ್ಯಮಂತ್ರಿ ಮೊಬೈಲ್ ನಿಷೇಧದ ನಿರ್ಧಾರ ತೆಗೆದುಕೊಂಡರು ಎಂದು ಮುಖ್ಯಮಂತ್ರಿಗಳ ಸಚಿವಾಲಯದ ಹಿರಿಯ ಅಧಿಕಾರಿಯೊಬ್ಬರು ಹೇಳಿದ್ದಾರೆ. ಈ ತೀರ್ಮಾನದಿಂದಾಗಿ ಎಲೆಕ್ಟ್ರಾನಿಕ್ ಸಾಧನಗಳನ್ನು ಬಳಸಿ ಕದ್ದಾಲಿಸುವ ಸಾಧ್ಯತೆ ಇಲ್ಲವಾಗಿದೆ. ಈ ಮೊದಲು ಸಚಿವರಿಗೆ ಮೊಬೈಲ್ ಫೋನ್ ಅನ್ನು ಸೈಲೆಂಟ್ ಮೋಡ್‌ನಲ್ಲಿ ತರಲು ಅನುಮತಿ ನೀಡಲಾಗಿತ್ತು. ಇದೀಗ ಸಚಿವರು ಮೊಬೈಲ್ ಇಡಲು ಕೌಂಟರ್ ಮತ್ತು ಟೋಕನ್ ವ್ಯವಸ್ಥೆಯನ್ನು ಮಾಡಲಾಗಿದೆ.

4